ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 25/04/2019

# ಹಲ್ಲೆ ಕೇಸ್: ಶಾಸಕ ಗಣೇಶ್‌ಗೆ ಕೊನೆಗೂ ಸಿಕ್ಕಿತು ಜಾಮೀನು

ಕ.ಪ್ರ 25/4/19



**15 ದಿನಕ್ಕೊಮ್ಮೆ ಪೊಲೀಸ್ ಠಾಣೆಗೆ ಹೋಗಿ ಸಹಿ ಹಾಕಬೇಕು: ಷರತ್ತು**

ಬೆಂಗಳೂರು: ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ಕಾಂಗ್ರೆಸ್ ಶಾಸಕ ಆನಂದ್ ಸಿಂಗ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ಆರೋಪದಲ್ಲಿ ಬಂಧನಕ್ಕೊಳಗಾಗಿ ಎರಡು ತಿಂಗಳಿಂದ ಜೈಲಿನಲ್ಲಿರುವ ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಅವರಿಗೆ ಬಿಡುಗಡೆ ಭಾಗ್ಯ ದೊರೆತಿದೆ. ಕಂಪ್ಲಿ ಗಣೇಶ್ ಅವರಿಗೆ ಹೈಕೋರ್ಟ್ ಬುಧವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಜಾಮೀನು ಕೋರಿ ಕಂಪ್ಲಿ ಗಣೇಶ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ಪೂರ್ಣಗೊಳಿಸಿ ತೀರ್ಪು ಕಾಯ್ದಿರಿಸಿದ್ದ ನ್ಯಾಯಮೂರ್ತಿ ಬಿ.ಎ.ಪಾಟೀಲ ಅವರಿದ್ದ ಏಕಸದಸ್ಯ ನ್ಯಾಯಪೀಠ, ಷರತ್ತುಬದ್ಧ ಜಾಮೀನು ನೀಡಿ ಬುಧವಾರ ತೀರ್ಪು ಪ್ರಕಟಿಸಿದೆ.

ಎರಡು ಲಕ್ಷ ರು. ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಅಷ್ಟೇ ಮೊತ್ತಕ್ಕೆ ಇಬ್ಬರ ಭದ್ರತಾ ಖಾತರಿ ಒದಗಿಸಬೇಕು. ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಾಕ್ಷ್ಯಾಧಾರಗಳನ್ನು ತಿರುಚುವ ಪ್ರಯತ್ನ ಮಾಡಬಾರದು. ಪ್ರಾಸಿಕ್ಯೂಷನ್ ಸಾಕ್ಷಿಗಳನ್ನು ಬೆದರಿಸಬಾರದು. ವಿಚಾರಣಾ ನ್ಯಾಯಾಲಯದ ಪೂರ್ವಾನುಮತಿ ಪಡೆಯದೇ ದೇಶ ಬಿಟ್ಟು ಹೋಗುವಂತಿಲ್ಲ. ಮುಂದಿನ ದಿನಗಳಲ್ಲಿ ಇದೇ ಮಾದರಿಯ ಪ್ರಕರಣಗಳಲ್ಲಿ ಭಾಗಿಯಾಗಬಾರದು. ತನಿಖಾಧಿಕಾರಿಗಳು ದೋಷಾರೋಪ ಪಟ್ಟಿ ಸಲ್ಲಿಸುವವರೆಗೂ 15 ದಿನಗಳಿಗೆ ಒಮ್ಮೆ ಮನೆ ಹತ್ತಿರದ ಪೊಲೀಸ್ ಠಾಣೆಗೆ ಹಾಜರಾಗಬೇಕು ಎಂದು ಜಾಮೀನು ಮಂಜೂರಾತಿಗೆ ನ್ಯಾಯಾಲಯ ಷರತ್ತು ವಿಧಿಸಿದೆ.